# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿನ star classified hotel ಗಳನ್ನು "ಕೈಗಾರಿಕೆ" ಎಂದು ಪರಿಗಣಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರಿ ಆದೇಶ ಸಂಖ್ಯೆ ಸಿಐ 86 ಎಸ್‌ಪಿಐ 2021, ದಿನಾಂಕ 04.03.2021.

2. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಪತ್ರ ಸಂಖ್ಯೆ ಕ.ಉ.ಮಿ/ಇ-8/ 51/2021-22, ದಿನಾಂಕ 05.06.2021.

23 SEP 2021

=000=

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ, ರಾಜ್ಯದಲ್ಲಿನ Star Classified Hotel ಗಳನ್ನು ದಿನಾಂಕ 01.04.2021 ರಿಂದ "ಕೈಗಾರಿಕೆ" ಎಂದು ಸ್ಥಾನಮಾನ ನೀಡಿ, ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಆದೇಶ ಹೊರಡಿಸಲಾಗಿದೆ.

*Star Classified Hotel ಗಳು "ಕೈಗಾರಿಕೆ" ಎಂದು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರಿಂದ ಪ್ರಮಾಣ ಪತ್ರ ಪಡೆಯತಕ್ಕದ್ದು.*

*ಈ ಕುರಿತು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರು ಪ್ರವಾಸೋದ್ಯಮ ಇಲಾಖೆಯೊಂದಿಗೆ ಸಮಾಲೋಚಿಸಿ ಮಾರ್ಗಸೂಚಿಗಳನ್ನು ತಯಾರಿಸಿ, ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.*

ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಮೇಲೆ ಓದಲಾದ (2)ರ ಪತ್ರದಲ್ಲಿ, ಮತ್ತೊಮ್ಮೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ Star Classified Hotel ಗಳು ಕೈಗಾರಿಕೆ ಎಂದು ಪ್ರಮಾಣ ಪತ್ರ ಪಡೆಯುವುದು ಅವಶ್ಯವಿಲ್ಲವೆಂದು, ವಿದ್ಯುತ್ ದರ ಮತ್ತು ಆಸ್ತಿ ತೆರಿಗೆಗೆ ಸಂಬಂಧಿಸಿದಂತೆ ಉದ್ಯಮದ ಸ್ಥಾನಮಾನದ ಪ್ರಯೋಜನಗಳನ್ನು ಆಯಾ ಇಲಾಖೆಯೇ ನೀಡುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯ ನೀಡಿರುತ್ತಾರೆ ಹಾಗೂ ಮೇಲೆ ಓದಲಾದ (1)ರ ಆದೇಶದಂತೆ ಸೌಲಭ್ಯಗಳನ್ನು ಪಡೆಯಬಹುದೆಂದು ತಿಳಿಸಿ, ಸದರಿ ಆದೇಶಕ್ಕೆ ತಿದ್ದುಪಡಿ ಮಾಡಿ ಪರಿಷ್ಕೃತ ಆದೇಶ ಹೊರಡಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ. ಸಿಐ 86 ಎಸ್‌ಪಿಐ 2021, ಬೆಂಗಳೂರು, ದಿನಾಂಕ 16.09.2021

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆದೇಶ ಸಂಖ್ಯೆ ಸಿಐ 86 ಎಸ್‌ಪಿಐ 2021, ದಿನಾಂಕ 04.03.2021ಕ್ಕೆ ಈ ಕೆಳಗಿನಂತೆ ತಿದ್ದುಪಡಿ ಮಾಡಿ ಆದೇಶಿಸಲಾಗಿದೆ.

| ಆದೇಶ ಭಾಗದ ಕಂಡಿಕೆ | ಸರ್ಕಾರಿ ಆದೇಶ ಸಂಖ್ಯೆ ಸಿಐ 86 ಎಸ್‌ಪಿಐ 2021, ದಿನಾಂಕ 04.03.2021 ರಲ್ಲಿರುವ ನಮೂದು | ತಿದ್ದುಪಡಿ |
|---|---|---|
| 2 | Star Classified Hotel ಗಳು "ಕೈಗಾರಿಕೆ" ಎಂದು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರಿಂದ ಪ್ರಮಾಣ ಪತ್ರ ಪಡೆಯತಕ್ಕದ್ದು. | ರಾಜ್ಯದಲ್ಲಿನ Star Classified Hotel ಗಳಿಗೆ ಕೈಗಾರಿಕೆ ಸ್ಥಾನಮಾನ ನೀಡಿರುವುದರಿಂದ, ದಿನಾಂಕ 01.04.2021 ರಿಂದ 31.03.2026 ರವರೆಗಿನ ಅವಧಿಗೆ ಸೀಮಿತಗೊಳಿಸಿದಂತೆ, ರಾಜ್ಯದ Star Classified Hotel ಗಳು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದಿಂದ ಪಡೆದ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು. |
| 3 | ಈ ಕುರಿತು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರು ಪ್ರವಾಸೋದ್ಯಮ ಇಲಾಖೆಯೊಂದಿಗೆ ಸಮಾಲೋಚಿಸಿ ಮಾರ್ಗಸೂಚಿಗಳನ್ನು ತಯಾರಿಸಿ, ಸರ್ಕಾರದ ಅನುಮೋದನೆ ಪಡೆಯತಕ್ಕದ್ದು. | ಈ ಸಂಬಂಧ ಪ್ರವಾಸೋದ್ಯಮ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ ಟಿಓಆರ್ 162 ಟಿಡಿಓ 2020, ದಿನಾಂಕ 18.06.2021 ರಲ್ಲಿ ರಚಿಸಿರುವ ಸಮಿತಿಯಂತೆ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮಾಲೋಚಿಸಿ ಅಗತ್ಯ ಮಾರ್ಗಸೂಚಿಗಳನ್ನು ಹೊರಡಿಸಲು ಕ್ರಮ ವಹಿಸತಕ್ಕದ್ದು. |

ಈ ಆದೇಶವನ್ನು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರ ಪ್ರಸ್ತಾವನೆ ದಿನಾಂಕ 05.06.2021 ಹಾಗೂ ಪ್ರವಾಸೋದ್ಯಮ ಇಲಾಖೆಯ ಟಿಪ್ಪಣಿ ಸಂಖ್ಯೆ TOR 162 TDB 2020 (ಭಾ) ದಿನಾಂಕ 25.08.2021 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

G. Nagarathnamma 16/9/2021
(ನಾಗರತ್ನಮ್ಮ. ಜಿ)
ಪೀಠಾಧಿಕಾರಿ (ತಾಂತ್ರಿಕ ಕೋಶ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

**ಇವರಿಗೆ,**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು - ಇವರಿಗೆ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಈ ಇಲಾಖೆಗೆ ಕಳುಹಿಸಲು ಕೋರಿದೆ.
2. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
4. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-01.
5. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-01.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-01.

7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು-01.

8. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.

9. ಸರ್ಕಾರದ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ, ಬೆಂಗಳೂರು-01.

10. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.

11. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ನಂ.49, 2ನೇ ಮಹಡಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01 - **ಪ್ರವಾಸೋದ್ಯಮ ಇಲಾಖೆಗೆ ಸಂಬಂಧಿಸಿದ ಇಲಾಖೆ/ನಿಗಮ/ಮಂಡಳಿ/ಸಂಸ್ಥೆ/ಸಂಘ-ಸಂಸ್ಥೆಗಳಿಗೆ ಈ ಆದೇಶವನ್ನು ತಮ್ಮ ಕಛೇರಿ ಮುಖಾಂತರ ರವಾನಿಸಲು ಕೋರಿದೆ.**

12. ಆಯುಕ್ತರು, ವಾಣಿಜ್ಯ ತೆರಿಗೆ ಇಲಾಖೆ, ತೆರಿಗೆ ಭವನ, ಗಾಂಧಿನಗರ, ಬೆಂಗಳೂರು-09.

13. ವ್ಯವಸ್ಥಾಪಕ ನಿರ್ದೇಶಕರು, ಕೆಪಿಟಿಸಿಎಲ್, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.

14. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಮೆಸ್ಕಾಂ, ಚೆಸ್ಕಾಂ, ಹೆಸ್ಕಾಂ.

15. ಕರ್ನಾಟಕದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.

16. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.

17. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಸಿಆಸುಇ, ವಿಧಾನಸೌಧ, ಬೆಂಗಳೂರು-01.

18. ನಿರ್ದೇಶಕರು (ತಾಂತ್ರಿಕ ಕೋಶ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.

19. ಸಂಚಾಲಕರು, ಎಸ್‌ಎಲ್‌ಬಿಸಿ, ಬೆಂಗಳೂರು.

20. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.